ಖಾಲಿ ಇರುವ ಗ್ರೂಪ್ ಡಿ ಹುದ್ದೆಗಳನ್ನು ಭರ್ತಿ ಮಾಡುವ ಬದಲಾಗಿ ಆಸ್ಪತ್ರೆಯ ಸ್ವಚ್ಛತೆ ಹಾಗೂ ಭದ್ರತಾ ವ್ಯವಸ್ಥೆಯನ್ನು ಖಾಸಗಿಯವರಿಗೆ ವಹಿಸಲು ಸರ್ಕಾರಿ ಆದೇಶವನ್ನು ಹೊರಡಿಸಲಾಗಿದೆ.

ಮಂಗಳೂರು ನಗರದ ಶಿಕ್ಷಕೇತರ ಸಿಬ್ಬಂದಿ ನೇಮಕಾತಿ.

62(311) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರು ನಗರದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕೇತರ ಸಿಬ್ಬಂದಿಗಳ ನೇಮಕಾತಿಯ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಆ) ನೇಮಕಾತಿಯನ್ನು ಯಾವಾಗ ಮಾಡಲಾಗುವುದು?

ಇ) ರಾಜ್ಯದ ಶಾಲಾ ಕ್ರೀಡೆಗೆ ವೈಜ್ಞಾನಿಕ ಚಟುವಟಿಕೆಗೆ ಪ್ರೋತ್ಸಾಹಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಮಂಗಳೂರು ನಗರದ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕೇತರ ಸಿಬ್ಬಂದಿಯ ಹುದ್ದೆಗಳ ಮಂಜೂರಾಗಿರುವುದಿಲ್ಲ. ಪ್ರೌಢಶಾಲಾ ಶಿಕ್ಷಕೇತರ ಸಿಬ್ಬಂದಿಯ ಪೈಕಿ ದ್ವಿತೀಯ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕ ಸಹಿತ ಬೆರಳಚ್ಚು ಗಾರರನ್ನು ನೇರ ನೇಮಕಾತಿ (ಕೆಪಿಎಸ್‌ಸಿ) ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. ಸಕ್ರಮಗೊಳಿಸಿದ ಡಿ ಗ್ರೂಪ್ ನೌಕರರ ಮಾಹಿತಿಯನ್ನು ಜಿಲ್ಲಾಧಿಕಾರಿಗಳಿಂದ ಪಡೆದು ಗ್ರೂಪ್-ಡಿ ಹುದ್ದೆಗಳನ್ನು ತುಂಬಲು ಜಿಲ್ಲಾ ಉಪನಿರ್ದೇಶಕರಿಗೆ ತಿಳಿಸಲಾಗಿದೆ. ಅನುಕಂಪದ ಆಧಾರದ ಮೇಲೆ ಆಯ್ಕೆಯಾದ ಅಭ್ಯರ್ಥಿಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಆ) ನೇಮಕಾತಿಯನ್ನು ಆದಷ್ಟು ಬೇಗನೆ ಮಾಡಲಾಗುವುದು.

ಇ) ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವೈಜ್ಞಾನಿಕವಾಗಿ ಕ್ರೀಡೆಗಳ ಬಗ್ಗೆ ತಿಳಿದುಕೊಳ್ಳಲು ಅನುಕೂಲವಾಗುವಂತೆ ಯೋಜನಾ ಕಾರ್ಯಕ್ರಮದಡಿಯಲ್ಲಿ ಭಾರತೀಯ ಕ್ರೀಡಾ ಪ್ರಾಧಿಕಾರದಲ್ಲಿ ತಜ್ಞರಿಂದ ಕ್ರೀಡಾ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ ಹಾಗೂ ಭಾರತೀಯ ಕ್ರೀಡಾ ಪ್ರಾಧಿಕಾರ ಮತ್ತು ಕೆಲವು ಜಿಲ್ಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಕ್ರೀಡಾ ತರಬೇತಿ ಶಿಬಿರಗಳನ್ನು ನಡೆಸಿ

ಕ್ರೀಡೆಗಳಲ್ಲಿ ಆಗುತ್ತಿರುವ ಮಾರ್ಪಾಡು ನೀತಿ ನಿಯಮಗಳಲ್ಲಿ ಆಧುನಿಕತೆ ಬಗ್ಗೆ ತಜ್ಞರಿಂದ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ಆಯ್ದ ಕ್ರೀಡಾಪಟುಗಳಿಗೆ ಕ್ರೀಡಾ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ.

ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಹಾಗೂ ಶಿಕ್ಷಕೇತರರ ಕೊರತೆ.

63(315) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಶಿಕ್ಷಕೇತರರ ಕೊರತೆ ಇದೆಯೇ?

ಆ) ಹಾಗಿದ್ದಲ್ಲಿ ಅವುಗಳನ್ನು ಯಾವಾಗ ನೇಮಕಾತಿ ಮಾಡಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :—

ಅ) ಮಂಗಳೂರು ನಗರದಲ್ಲಿರುವ ಎರಡು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಎರಡು ಹಿಂದಿ ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. ಶಿಕ್ಷಕೇತರರ ಕೊರತೆ ಇರುವುದಿಲ್ಲ.

ಆ) ಸದ್ಯದಲ್ಲೇ ಈ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ತೆಗೆದುಕೊಳ್ಳಲಾಗುವುದು.

ರಾಜ್ಯ ಸರ್ಕಾರ ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ

64(305) ಶ್ರೀ ಎನ್. ಯೋಗೇಶ್ ಭಟ್ (ಮಂಗಳೂರು) :—ಮಾನ್ಯ ಗಣಿ ಮತ್ತು ಭೂವಿಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸರ್ಕಾರವು ರಾಜ್ಯ ಎಷ್ಟು ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕ್ರಮ ಕೈಗೊಂಡಿದೆ ಹಾಗೂ ಯಾವ ಕ್ರಮ ಕೈಗೊಂಡಿದೆ (ವಿವರ ಒದಗಿಸುವುದು)

ಆ) ರಾಜ್ಯದಲ್ಲಿ ಪರಿಸರ ನೈರ್ಮಲ್ಯದ ಜಾಗೃತಿಗೆಂದೇ ಹಾಕಿಕೊಂಡಿರುವ ಕಾರ್ಯಕ್ರಮಗಳೇನು?